# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ:19/12/2020 ರಂದು **ಬೆಳಿಗ್ಗೆ:11.00** ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೇಗೂರು ವಾರ್ಡ್ ಸಂಖ್ಯೆ-192 ರ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ರವರ ಸಮ್ಮುಖದಲ್ಲಿ ಅವರ ಅಧ್ಯಕ್ಷತೆಯೊಂದಿಗೆ ಬೇಗೂರು ಉಪ-ವಿಭಾಗದ ಕಛೇರಿಯಲ್ಲಿ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ಚಲುವರಾಜು.ಎಸ್. ಕಿರಿಯ ಅಭಿಯಂತರರು, ವಾರ್ಡ್ ಸಂಖ್ಯೆ-192 ಬೇಗೂರು ರವರು ಸಭೆಗೆ ಹಾಜರಾಗಿದ್ದಂತಹ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಹಾಗೂ ಇತರರನ್ನು ಸ್ವಾಗತಿಸಿ ಕಾರ್ಯಕ್ರಮ ಪ್ರಾರಂಭಿಸಿದರು.

## ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:

1. ವಾರ್ಡ್‌ನ ಡಾಂಬರೀಕರಣದ ಕಾಮಗಾರಿಗಳನ್ನು ಅತೀ ಜರೂರಾಗಿ ಪ್ರಾರಂಭಿಸುವ ಬಗ್ಗೆ,
2. ಗೇಟೆಡ್ ಕಮ್ಯೂನಿಟಿ ಬಡಾವಣೆಗಳಲ್ಲಿ ಅಭಿವೃದ್ಧಿಗೊಳಿಸುವಾಗ ಪಾರ್ಕ್ ಪ್ರದೇಶಗಳೆಂದು ಗುರುತಿಸಿರುವ ಪ್ರದೇಶಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ.
3. ಕುಡಿಯುವ ನೀರು ಸರಬರಾಜು ಬಗ್ಗೆ,
4. ಘನತ್ಯಾಜ್ಯ ಬ್ಲಾಕ್‌ಸ್ಪಾಟ್‌ಗಳನ್ನು ತೆರವು ಮಾಡುವ ಬಗ್ಗೆ,
5. ವಾರ್ಡ್‌ನ ಸಾರ್ವಜನಿಕರ ಕುಂದುಕೊರತೆಗಳ ಬಗ್ಗೆ,
6. ಬೀದಿ ದೀಪಗಳ ನಿರ್ವಹಣೆಯ ಬಗ್ಗೆ,
7. ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ,
8. ಕೋವಿಡ್-19 ಟೆಸ್ಟ್‌ಗಳನ್ನು ಜನನಿಬಿಡ ಪ್ರದೇಶಗಳಲ್ಲಿ ಮುಂದುವರೆಸುವ ಬಗ್ಗೆ.

## ವಾರ್ಡ್ ನಂ-192

## ವಾರ್ಡ್ ಸಮಿತಿ ಸಭೆಗೆ ಹಾಜರಾಗಲು ಸೂಚಿಸಿರುವವರ ವಿವರ

| ಕ್ರ.ಸಂ | ಹೆಸರು | ಹುದ್ದೆ | ಹಾಜರಾತಿ |
|---|---|---|---|
| 1 | ಶ್ರೀ.ನೀಲಕಂಠಯ್ಯ.ಕೆ.ಪಿ. | ಅಧ್ಯಕ್ಷರು/ನೋಡೆಲ್ ಅಧಿಕಾರಿಗಳು | ಹಾಜರಾಗಿರುತ್ತಾರೆ |
| 2 | ಶ್ರೀ.ಚಲುವರಾಜು.ಎಸ್. | ಕಾರ್ಯದರ್ಶಿ (ಕಿ.ಅ.) | ಹಾಜರಾಗಿರುತ್ತಾರೆ |
| 3 | ಶ್ರೀ.ಆರ್.ಕುಮಾರ್ | ಬೆಸ್ಕಾಂ. ಸ.ಕಾ.ಅ. | ಗೈರು ಹಾಜರು |
| 4 | ಶ್ರೀಮತಿ.ವಿನಯಕುಮಾರಿ | ಸ.ಕಾ.ಅ. ಬಿ.ಡಬ್ಲ್ಯೂ.ಎಸ್.ಎಸ್.ಬಿ | ಹಾಜರಾಗಿರುತ್ತಾರೆ |
| 5 | ಶ್ರೀ.ರಮೇಶ್ | ಸ.ಕಾ.ಅ. ಬೀದಿ ದೀಪ ಇಲಾಖೆ | ಗೈರು ಹಾಜರು |

Scanned with CamScanner

| | | | |
|---|---|---|---|
| 6 | ಶ್ರೀ.ಸಂತೋಷ್ ದೀಪು | ಅರಣ್ಯ | ಹಾಜರಾಗಿರುತ್ತಾರೆ |
| 7 | ಶ್ರೀ.ಮಂಜುನಾಥ್ | ಸರ್ಕಲ್ ಇನ್ಸ್‌ಪೆಕ್ಟರ್, ಬೇಗೂರು | ಗೈರು ಹಾಜರು |
| 8 | ಶ್ರೀ.ಬಾಲಾಜಿ | ಸ.ಕಾ.ನಿ.ಅ. (ಎಸ್.ಡಬ್ಲ್ಯೂ.ಡಿ) | ಗೈರು ಹಾಜರು |
| 9 | ಶ್ರೀ.ರಮೇಶ್ | ಸ.ಕಾ.ನಿ.ಅ. (ರ.ಮು.ಸೌ) | ಗೈರು ಹಾಜರು |
| 10 | ಶ್ರೀ.ರಮೇಶ್.ಎಲ್. | ಕಿ.ಆ.ಪ. | ಹಾಜರಾಗಿರುತ್ತಾರೆ |
| 11 | ಶ್ರೀ.ಶ್ರೀಧರ್.ಎಸ್. | ಹಿ.ಆ.ಪ | ಹಾಜರಾಗಿರುತ್ತಾರೆ |
| 12 | ಶ್ರೀ.ರವಿ | ಬೀದಿ ದೀಪ ನಿರ್ವಹಣೆ | ಗೈರು ಹಾಜರು |
| 13 | ಶ್ರೀ.ನರಸಪ್ಪ | ತೋಟಗಾರಿಕೆ ಇಲಾಖೆ | ಹಾಜರಾಗಿರುತ್ತಾರೆ |
| 14 | ಶ್ರೀ.ರಂಗಪ್ಪ ಸ.ಅ. | ಬಿ.ಡಬ್ಲ್ಯೂ.ಎಸ್.ಎಸ್.ಬಿ | ಗೈರು ಹಾಜರು |
| 15 | ಶ್ರೀ.ರಮೇಶ್ | ಸದಸ್ಯರು | ಹಾಜರಾಗಿರುತ್ತಾರೆ |
| 16 | ಶ್ರೀ.ಮಂಜುನಾಥ | ಸದಸ್ಯರು | ಹಾಜರಾಗಿರುತ್ತಾರೆ |
| 17 | ಶ್ರೀ.ರಮೇಶ್ ಆರಾಧ್ಯ | ಸದಸ್ಯರು | ಹಾಜರಾಗಿರುತ್ತಾರೆ |
| 18 | ಶ್ರೀಮತಿ.ಶಿಲ್ಪ ರಮೇಶ್ | ಸಧಸ್ಯರು | ಹಾಜರಾಗಿರುತ್ತಾರೆ |

## ಸಭೆಯ ನಡಾವಳಿಗಳು

1. ವಾರ್ಡ್ ನಂ-192 ಬೇಗೂರು ವ್ಯಾಪ್ತಿಯಲ್ಲಿ ಮಂಜೂರಾಗಿರುವ ಡಾಂಬರೀಕರಣದ ಕಾಮಗಾರಿಗಳನ್ನು ಅತೀ ಜರೂರಾಗಿ ಪ್ರಾರಂಭಿಸುವಂತೆ ಬಿ.ಕೆ. ರೆಸಿಡೆನ್ಸಿ ಅಸೋಸಿಯೇಷನ್‌ರವರು ಮತ್ತು ಪ್ರಗತಿನಗರ ಅಸೋಸಿಯೇಷನ್‌ರವರು ಕೋರಿಕೊಂಡಿರುತ್ತಾರೆ.
   ಕ್ರಮ: ಈ ಬಗ್ಗೆ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ವಾರ್ಡ್‌ಗೆ ಮಂಜೂರಾಗಿರುವ ಡ್ಯಾಂಬರೀಕರಣದ ಕಾಮಗಾರಿಗಳು ಮಳೆಗಾಲದ ಪ್ರಯುಕ್ತ ಮುಂದೂಡಲಾಗಿತ್ತು ಆದರೆ ಈಗಾಗಲೇ ಕೆಲವು ಪ್ರದೇಶಗಳಲ್ಲಿ ಡಾಂಬರೀಕರಣದ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ಸಭೆಗೆ ತಿಳಿಸಿರುತ್ತಾರೆ.

2. ವಾರ್ಡ್ ನಂ-192 ಬೇಗೂರು ವ್ಯಾಪ್ತಿಯಲ್ಲಿ ಕೆಲವು ಗೇಟೆಡ್ ಕಮ್ಯೂನಿಟಿ ಬಡಾವಣೆಗಳಿದ್ದು, ಸದರಿ ಬಡಾವಣೆಗಳನ್ನು ಅಭಿವೃದ್ಧಿಗೊಳಿಸುವಾಗ ಪಾರ್ಕ್ ನಿರ್ಮಾಣ ಮಾಡಲು ಮೀಸಲಿರಿಸಿರುವ ಪ್ರದೇಶಗಳನ್ನು ಪಾರ್ಕ್‌ಗಳಾಗಿ ಅಭಿವೃದ್ಧಿಪಡಿಸಬೇಕೆಂದು ಬೇಗೂರು ವುಡ್ಸ್ ಅಸೋಸಿಯೇಷನ್‌ರವರು ಮಾನ್ಯ ಅಧ್ಯಕ್ಷರಿಗೆ ಮನವಿ ಸಲ್ಲಿಸಿರುತ್ತಾರೆ.
   ಕ್ರಮ: ವಾರ್ಡ್‌ನ ಸಹಾಯಕ ಅಭಿಯಂತರರು, ಹಾಗೂ ಅರಣ್ಯ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ತಪಾಸಣೆ ಮಾಡಿ ಅಸೋಸಿಯೇಷನ್‌ರವರ ಸಹಯೋಗದೊಂದಿಗೆ ಮರಗಳ ಉದ್ಯಾನವನಗಳು(ಟ್ರೀ ಫಾರ್ಕ್) ಮಾಡಲು ಕ್ರಮವಹಿಸುವಂತೆ ಸೂಚಿಸಿದರು.

Scanned with CamScanner

3. ವಾರ್ಡ್ ನಂ-192 ಬೇಗೂರು ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ತೊಂದರೆ ಇರುವ ಪ್ರದೇಶಗಳಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಈ ಬಗ್ಗೆ ದೂರು ಬರದಿರುವಂತೆ ಸಮರ್ಪಕವಾಗಿ ನಿರ್ವಹಣೆ ಮಾಡುವಂತೆ ನೀರು ಸರಬರಾಜು ಗುತ್ತಿಗೆದಾರರನ್ನು ಕರೆದು ಸೂಚನೆ ನೀಡುವಂತೆ ಹಾಗೂ ವಾಟರ್‌ಮ್ಯಾನ್‌ಗಳು ಪ್ರತಿದಿನ ಈ ಬಗ್ಗೆ ವರಧಿಯನ್ನು ವಾರ್ಡ್‌ನ ಸಹಾಯಕ ಅಭಿಯಂತರರು ಪಡೆಯುವಂತೆ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸೂಚಿಸಿದರು.

ಕ್ರಮ: ಸಹಾಯಕ ಅಭಿಯಂತರರು, ವಾರ್ಡ್ ನಂ-192

4. ಸದರಿ ವಾರ್ಡ್‌ನ ಪರಿವೀಕ್ಷಣಾ ಸಮಯದಲ್ಲಿ ಘನತ್ಯಾಜ್ಯ ನಿರ್ವಹಣೆ ಸಮರ್ಪಕವಾಗಿ ನಿರ್ವಹಿಸದಿರುವ ಬಗ್ಗೆ ಹಾಗೂ ದೈನಂದಿನ ಕಸ ಸಂಗ್ರಹಣೆ ಮಾಡದಿರುವ ಬಗ್ಗೆ ಹಾಗೂ ಸಾರ್ವಜನಿಕರು ದೂರನ್ನು ನೀಡಿರುತ್ತಾರೆ. ಈ ಬಗ್ಗೆ ಸಮರ್ಪಕವಾಗಿ ನಿರ್ವಹಣೆ ಮಾಡುವಂತೆ ಹಾಗೂ ಘನತ್ಯಾಜ್ಯದ ಬ್ಲಾಕ್‌ಸ್ಪಾಟ್‌ಗಳನ್ನು ತೆರವು ಮಾಡಲು ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸೂಚಿಸಿದರು.

ಕ್ರಮ: ಕಿರಿಯ ಆರೋಗ್ಯ ಪರಿವೀಕ್ಷಕರು(ಘನತ್ಯಾಜ್ಯ ನಿರ್ವಹಣಾ ಘಟಕ)

5. ಸಾರ್ವಜನಿಕರ ಕುಂದು ಕೊರತೆಗಳಲ್ಲಿ ಅಕ್ಷಯನಗರ ಪೂರ್ವ ಭಾಗದ ಸಾರ್ವಜನಿಕರು ರಸ್ತೆಯನ್ನು ನಿರ್ಮಾಣ ಮಾಡಿಕೊಡಬೇಕೆಂದು ಸಭೆಯಲ್ಲಿ ಹಾಜರಾಗಿದ್ದಂತಹ ಶ್ರೀಮತಿ.ಸುಧಾ ಮತ್ತು ಇತರರು ಕೋರಿದ್ದು ಈ ಬಗ್ಗೆ ಕ್ರಮವಹಿಸುವಂತೆ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸೂಚಿಸಿದರು.

ಕ್ರಮ: ಸಹಾಯಕ ಅಭಿಯಂತರರು, ವಾರ್ಡ್ ನಂ-192 ರವರು ಈ ಬಗ್ಗೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಲಾಯಿತು.

6. ವಾರ್ಡ್ ವ್ಯಾಪ್ತಿಯ ಬೀದಿ ದೀಪಗಳ ನಿರ್ವಹಣೆಯ ಬಗ್ಗೆ ಹಾಗೂ ಮೈಕೋ ಬಡಾವಣೆ ಮತ್ತು ಇತರೆ ಪ್ರದೇಶದ ಸಾರ್ವಜನಿಕರು ಬೀದಿ ದೀಪಗಳ ರಿಪೇರಿ ಬಗ್ಗೆ ಹಲವಾರು ಬಾರಿ ದೂರವಾಣಿ ಕರೆ ಮಾಡಿದ್ದರೂ ಸಹ: ಸ್ಪಂದಿಸದೇ ಇರುವ ಬಗ್ಗೆ ಬೇಸರ ವ್ಯಕ್ತಪಡಿಸಿರುತ್ತಾರೆ.

ಕ್ರಮ: ಬೀದಿ ದೀಪಗಳ ನಿರ್ವಹಣೆಯ ಗುತ್ತಿಗೆದಾರರು ಪ್ರತಿದಿನ ವಾರ್ಡ್ ಕಛೇರಿಯ ರಿಜಿಸ್ಟಾರ್‌ನಲ್ಲಿ ನಮೂದಾಗಿರುವ ಬೀದಿ ದೀಪಗಳ ನಿರ್ವಹಣೆಯ ರಿಪೇರಿಯ ಪಟ್ಟಿಯನ್ನು ಪಡೆದು ರಿಪೇರಿ ಮಾಡಿದ ನಂತರ ಸಾರ್ವಜನಿಕರಿಗೆ ಮಾಹಿತಿ ನೀಡತಕ್ಕದ್ದು ಎಂದು ಅಧ್ಯಕ್ಷರು ಸೂಚಿಸಿದರು.

Scanned with CamScanner

7. ವಾರ್ಡ್ ವ್ಯಾಪ್ತಿಯಲ್ಲಿ ಉಂಟಾಗಿರುವ ರಸ್ತೆ ಗುಂಡಿಗಳನ್ನು ಗುರುತಿಸಿ ಮುಚ್ಚುವ ಕಾರ್ಯವನ್ನು ಮುಂದುವರೆಸಲು ಸಾರ್ವಜನಿಕರು ಕೋರಿಕೊಂಡಿರುತ್ತಾರೆ.

   ಕ್ರಮ: ಸಹಾಯಕ ಅಭಿಯಂತರರು, ವಾರ್ಡ್ ನಂ-192, ಬೇಗೂರು, ಬಿ.ಬಿ.ಎಂ.ಪಿ

8. ಕೋವಿಡ್-19 ಟೆಸ್ಟ್‌ಗಳನ್ನು ಜನನಿಬಿಡ ಪ್ರದೇಶಗಳಲ್ಲಿ ಮುಂದುವರೆಸುವಂತೆ ಅಧ್ಯಕ್ಷರು ವೈದ್ಯಾಧಿಕಾರಿರವರಿಗೆ ಮಾನ್ಯ ವಾರ್ಡ್ ಕಮಿಟಿ ಅಧ್ಯಕ್ಷರು ಸೂಚಿಸಿದರು

   ಕ್ರಮ: ವೈದ್ಯಾಧಿಕಾರಿಗಳು, ಬೇಗೂರು, ಪ್ರಾಥಮಿಕ ಆರೋಗ್ಯ ಕೇಂದ್ರ.

9. ದಿನಾಂಕ:05.12.2020ರ ಸಭೆಯಲ್ಲಿ ಪ್ರಸ್ತಾಪವಾಗಿದ್ದ ವಿಷಯ ಎಮ್.ಎಲ್.ಎ. ಬಡಾವಣೆಯಿಂದ ನೋಬೋ ನಗರಕ್ಕೆ ಸಂಪರ್ಕ ಕಲ್ಪಿಸಲು ರಸ್ತೆಯನ್ನು ನಿರ್ಮಾಣ ಮಾಡುವಂತೆ ಶ್ರೀ.ರಮೇಶ್ ಆರಾಧ್ಯ ರವರು ಸೂಚಿಸಿದ್ದರ ಮೇರೆಗೆ ಸಹಾಯಕ ಅಭಿಯಂತರರು ಕಾರ್ಯ ಪ್ರವೃತ್ತರಾಗಿ ಸಂಪರ್ಕ ರಸ್ತೆಯನ್ನು ನಿರ್ಮಾಣ ಮಾಡಿರುತ್ತಾರೆ. ಕಾಳೇನ ಅಗ್ರಹಾರ ಎಮ್.ಎಲ್.ಎ. ಬಡಾವಣೆ ನೋಬೋ ನಗರದ ನಿವಾಸಿಗಳು ಹರ್ಷ ವ್ಯಕ್ತಪಡಿಸಿರುತ್ತಾರೆ. ಸದರಿ ಕೆಲಸಗಳನ್ನು ಇದೇ ರೀತಿ ಮುಂದುವರೆಸುವಂತೆ ಮಾನ್ಯ ವಾರ್ಡ್ ಕಮಿಟಿ ಅಧ್ಯಕ್ಷರು ಸೂಚಿಸಿದರು

   ಕ್ರಮ: ಸಹಾಯಕ ಅಭಿಯಂತರರು, ವಾರ್ಡ್ ನಂ-192 ರವರು ಈ ಬಗ್ಗೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಲಾಯಿತು.

<u>**ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.**</u>

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ನಂ -192 ಬೇಗೂರು

19/12/2020

ಅಧ್ಯಕ್ಷರು
ವಾರ್ಡ್ ಕಮಿಟಿ ಅಧ್ಯಕ್ಷರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ನಂ-192, ಬೇಗೂರು

**ಪ್ರತಿಗಳು:-**

1) ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ,
2) ಉಪ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ,
3) ಸಹಾಯಕ ಕಂದಾಯ ಅಧಿಕಾರಿ (ಬೇಗೂರು) ಉಪವಿಭಾಗ ರವರ ಅವಗಾಹನೆಗೆ,
4) ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿ ರವರ ಅವಗಾಹನೆಗೆ,
5) ಕಛೇರಿ ಕಡತಕ್ಕೆ

Scanned with CamScanner